**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹೊನ್ನಾವರ.**

ಸಿಸಿ ನಂಃ 1508/2023

ಸಿ ಡಬ್ಲುಃ 1

ಪಿ ಡಬ್ಲುಃ 1

| | |
|---|---|
| ಸಾಕ್ಷಿದಾರರ ಹೆಸರು | ಈಶ್ವರ್ ಮರಾಠಿ |
| ತಂದೆಯ ಹೆಸರು | ರಾಮ್ |
| ವಯಸ್ಸು | 39 |
| ಉದ್ಯೋಗ | ರೈತಾಪಿ |
| ವಾಸ್ತವ್ಯ | ಹಡಿಕಲ್ |

ಸಾಕ್ಷಿಯನ್ನು ದಿನಾಂಕ **22-07-2026** ರಂದು ಕರೆಸಲಾಯಿತು ಮತ್ತು ಪ್ರಮಾಣ ವಚನ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ ಸ.ಸ.ಅಭಿಯೋಜಕ ರವರಿಂದಃ**

ನ್ಯಾಯಾಲಯದ ಮುಂದಿರುವ ಆರೋಪಿತನ ಪರಿಚಯ ಇದೆ, ನನ್ನ ತಮ್ಮನಾಗಬೇಕು. ಆರೋಪಿ ಹಾಗೂ ನನ್ನ ನಡುವೆ ಯಾವುದೇ ಗಲಾಟೆ ಆದದ್ದು ಇರುವುದಿಲ್ಲ. ಆರೋಪಿ ನನ್ನನ್ನು ಉದ್ದೇಶಿಸಿ ಅವಾಚ್ಯವಾಗಿ ಬೈದದ್ದು ಇರುವುದಿಲ್ಲ, ಆರೋಪಿಯು ನನಗೆ ಕತ್ತಿಯಿಂದ ಹಲ್ಲೆ ಮಾಡಿದ್ದು ಇರುವುದಿಲ್ಲ. ಆರೋಪಿ ನನಗೆ ಜೀವ ಬೆದರಿಕೆ ಹಾಕಿದ್ದು ಇರುವುದಿಲ್ಲ. ಘಟನೆಯ ಕುರಿತು ನಾನು ಯಾವುದೇ ದೂರನ್ನು ನೀಡಿದ್ದು ಇರುವುದಿಲ್ಲ. ಸಾಕ್ಷಿಗೆ ದೂರನ್ನು ತೋರಿಸಲಾಗಿ ಅದರಲ್ಲಿರುವ ಸಹಿಯನ್ನು ಒಪ್ಪಿಕೊಂಡಿರುತ್ತಾರೆ ಸದರಿ ದಾಖಲೆಯನ್ನು **ನಿಪಿ.1** ಎಂದು, ಸಾಕ್ಷಿಯ ಸಹಿಯನ್ನು **ನಿಪಿ.1(ಎ)** ಎಂದು ಗುರುತಿಸಲಾಯಿತು. ಸದರಿ ದೂರಿನಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಸದರಿ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಸದರಿ ದಾಖಲೆಯನ್ನು **ನಿಪಿ.2** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ.2(ಎ)** ಎಂದು ಗುರುತಿಸಲಾಯಿತು. ಪಂಚನಾಮೆ ಸಮಯದಲ್ಲಿ ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿದ್ದು ಇರುವುದಿಲ್ಲ. ನಾನು ಪೊಲೀಸರ ಮುಂದೆ ಮರು ಹೇಳಿಕೆಯನ್ನು ನೀಡಿಲ್ಲ.

**(ಸಾಕ್ಷಿಯು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎ.ಪಿ.ಪಿ. ರವರು ಕೋರಿದ ಮೇರೆಗೆ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲು ಃ ಮಾನ್ಯ ಎಪಿಪಿ ರವರಿಂದ.</u>**

ದಿಃ 03-11-2023 ರಂದು ಸಾಯಂಕಾಲ 19-00 ಗಂಟೆಗೆ ನಾನು ನಮ್ಮ ಮನೆಯ ಮೇಲ್ಬದಿಗೆ ಇರುವ 4 ಗುಂಟೆ ಅರಣ್ಯ ಅತಿಕ್ರಮಣ ಜಾಗೆಯಲ್ಲಿ ನೆಟ್ಟಿರುವ ಅಡಿಕೆ ಗಿಡಗಳಿಗೆ ನೀರು ಸರಬರಾಜು ಮಾಡಲು ನಮ್ಮ ಮನೆ ಬಾವಿಯಿಂದ ಪೈಪ್ ಹಾಕಲು ಕೆಲಸಗಾರರಾದ ಚಾಸಾ5 ರಿಂದ 8 ರವರಿಗೆ ಕರೆಸಿ, ಕೆಲಸ ಮಾಡಿಸುತ್ತಿರುವಾಗ ಆರೋಪಿಯು ಕೈಯಲ್ಲಿ ಕತ್ತಿ ಹಿಡಿದುಕೊಂಡು ಬಂದು ರಸ್ತೆ ಪಕ್ಕದಲ್ಲಿ ನಿಂತಿರುವ ನನ್ನನ್ನು ಉದ್ದೇಶಿಸಿ ಬೋಳಿಮಗನೆ, ಸೂಳೆಮಗನೆ ನನ್ನ ಜಾಗೆಯಲ್ಲಿ ಪೈಪ್ ಹಾಕಬೇಡ ಎಂದು ಹೇಳಿದ ಎಂದರೆ ಸರಿಯಲ್ಲ. ಆರೋಪಿಯು ನನಗೆ ಕೈಯಲ್ಲಿದ್ದ ಕತ್ತಿಯಿಂದ ನನ್ನ ತಲೆ, ಮೂಗು ಮತ್ತು ಬಲಗೈಗೆ ಹೊಡೆದು ಗಾಯಪಡಿಸಿದ್ದನು ಎಂದರೆ ಸರಿಯಲ್ಲ. ಗಲಾಟೆಯನ್ನು ತಪ್ಪಿಸಲು ಬಂದ ನನ್ನ ಹೆಂಡತಿ ಚಾಸಾ4 ರವರು ಒಮ್ಮೆಲೆ ಚೀರಾಡಿದಾಗ ಅಲ್ಲೇ ಕೆಲಸ ಮಾಡುತ್ತಿದ್ದ ಚಾಸಾ5 ರಿಂದ 8 ರವರು ಬಂದು ನನ್ನನ್ನು ಆರೋಪಿಯಿಂದ ತಪ್ಪಿಸಿದ್ದಾರೆ ಎಂದರೆ ಸರಿಯಲ್ಲ. ಆರೋಪಿತನು ಅಲ್ಲಿಂದ ಹೋಗುವಾಗ ನನ್ನನ್ನು ಉದ್ದೇಶಿಸಿ ಇನ್ನೊಮ್ಮೆ ಈ ಜಾಗೆಯಲ್ಲಿ ಪೈಪ್ ಹಾಕಲು ಬಂದರೆ ನಿನ್ನನ್ನು ಮುಗಿಸುತ್ತೇನೆ ಎಂದು ಜೀವ ಬೆದರಿಕೆ ಹಾಕಿದನು ಎಂದರೆ ಸರಿಯಲ್ಲ. ಈ ಬಗ್ಗೆ ನಿಪಿ1 ರಂತೆ ನಾನು ದೂರನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ದಿಃ 04-11-2023 ರಂದು ನಾನು ತೋರಿಸಿದ ಘಟನಾ ಸ್ಥಳದಲ್ಲಿ ಚಾಸಾ2 ಮತ್ತು 3 ರವರ ಸಮಕ್ಷಮ ಪಂಚನಾಮೆ ಜರುಗಿಸಿದ್ದಾರೆ ಎಂದರೆ ಸರಿಯಲ್ಲ. ಪಂಚನಾಮೆ ಸಮಯದಲ್ಲಿ ವಸ್ತುಗಳನ್ನು ಜಪ್ತುಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ದಿಃ 04-11-2023 ರಂದು ಪೊಲೀಸರ ಮುಂದೆ ಮರು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಮರು ಹೇಳಿಕೆಯಲ್ಲಿರುವ ಅಂಶಗಳನ್ನು ಅಲ್ಲಗಳೆದಿದ್ದರಿಂದ ಅದನ್ನು **ನಿಪಿ.3** ಎಂದು ಗುರುತಿಸಲಾಯಿತು. ನನಗೆ ಎಲ್ಲಾ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಯೊಂದಿಗೆ ರಾಜೀ ಮಾಡಿಕೊಂಡಿರುವುರಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿ ಪರ ವಕೀಲರು ಪಾಟಿ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತಗೊಳಿಸಲಾಯಿತು.)

ಓ ಹೆ ಕೇ ಸರಿ ಇದೆ.

**-Sd/-**

**ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾದಂ..**
**ಹೊನ್ನಾವರ.**